ಕರ್ನಾಟಕಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 03 ಇಎಸ್‌ಟಿ(8) 2025

ಆಯುಕ್ತರಕಛೇರಿ,
ಕಾಲೇಜು ಮತ್ತುತಾಂತ್ರಿಕ ಶಿಕ್ಷಣ ಇಲಾಖೆ,
ತಾಂತ್ರಿಕ ಭವನ, ಅರಮನೆ ರಸ್ತೆ,
ಬೆಂಗಳೂರು-01, ದಿ:11-06-2025.

## ಪರಿಚಲನಾದೇಶ

ಸರ್ಕಾರದ ಆದೇಶ ಅಧಿಸೂಚನೆ ಸಂಖ್ಯೆ: ಇಡಿ 465 ಟಿಇಸಿ 2024 ದಿನಾಂಕ: 29.05.2025 ರಲ್ಲಿ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 ರ (1990ರ ಕರ್ನಾಟಕ (ಎ) ಖಂಡದ ಮೂಲಕ ಅಗತ್ಯಪಡಿಸಿರುವಂತೆ, ಕರ್ನಾಟಕ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮಗಳು, 2025 ರ ಕರಡನ್ನು ಪ್ರಕಟಿಸಲಾಗಿದೆ. ಸದರಿ ಅಧಿಸೂಚನೆಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಪ್ರತಿ:

1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಇ-ಆಡಳಿತ ವಿಭಾಗಕ್ಕೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು
3. ಕಛೇರಿ ಪ್ರತಿ

Scanned with CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 465 ಟಿಇಸಿ 2024

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಡಾ. ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:29.05.2025

ತಾಂತ್ರಿಕ ಶಿಕ್ಷಣ ಇಲಾಖೆ
ನಿರ್ದೇಶಕರ ಕಛೇರಿ
ಸಂಖ್ಯೆ 232
3/6/25

**ಅಧಿಸೂಚನೆ**

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 ರ (1990ರ ಕರ್ನಾಟಕ ಅಧಿನಿಯಮ 14) 8ನೇ ಪ್ರಕರಣವನ್ನು ಓದಿಕೊಂಡು, 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಿರುವಂತೆ, ಕರ್ನಾಟಕ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮಗಳು, 2025 ರ ಕರಡನ್ನು ಪ್ರಕಟಿಸಲಾಗುತ್ತಿದ್ದು, ಅಧಿಕೃತ ರಾಜ್ಯಪತ್ರದಲ್ಲಿ ಈ ಕರಡು ಪ್ರಕಟವಾದ ದಿನಾಂಕದಿಂದ ಹದಿನೈದು (15) ದಿನಗಳ ಅವಧಿಯು ಮುಗಿದ ನಂತರ, ಈ ಕರಡು ನಿಯಮಾವಳಿಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದು.

ಈ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಮೇಲ್ಕಂಡ ಅವಧಿ ಮುಗಿಯುವ ಮೊದಲು ಯಾವುದೇ ವ್ಯಕ್ತಿಯಿಂದ ರಾಜ್ಯ ಸರ್ಕಾರಕ್ಕೆ ಆಕ್ಷೇಪಣೆ ಅಥವಾ ಸಲಹೆಗಳು ಸ್ವೀಕೃತವಾದಲ್ಲಿ, ಅವುಗಳನ್ನು ರಾಜ್ಯ ಸರ್ಕಾರವು ಪರಿಗಣಿಸುತ್ತದೆ. ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001 ಇವರಿಗೆ ಸಲ್ಲಿಸಬಹುದು.

**ಕರಡು ನಿಯಮಗಳು**

1. **ಶೀರ್ಷಿಕೆ ಮತ್ತು ಆರಂಭ** : (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮಗಳು, 2025 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು, ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮ ಅಧಿಸೂಚನೆ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **4ನೇ ನಿಯಮದ ತಿದ್ದುಪಡಿ**: ಕರ್ನಾಟಕ ಸಿವಿಲ್ ಸೇವೆಗಳ (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ನಿಯಮಗಳು, 2021ರ 4ನೇ ನಿಯಮದ ಉಪ ನಿಯಮ (4) ರ ಖಂಡ (ಬಿ) ನಂತರದಲ್ಲಿ ಈ ಕೆಳಕಂಡಂತೆ ಸೇರಿಸತಕ್ಕದ್ದು. ಎಂದರೆ:-

Scanned with CamScanner

"(ಸಿ) ಪರಂತು, ಈ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಬೋಧಕರು ತೀವ್ರತರ ಅಂಗವೈಕಲ್ಯತೆಯನ್ನು ಹೊಂದಿದ್ದರೆ ಮತ್ತು ಬೋಧಕರ ಪತಿ ಅಥವಾ ಪತ್ನಿ, ಮಕ್ಕಳು ಮತ್ತು ಅವಲಂಬಿತ ತಂದೆ-ತಾಯಿ, ಇವರುಗಳು ತೀವ್ರತರ ಅಂಗವೈಕಲ್ಯತೆಯನ್ನು ಹೊಂದಿದ್ದರೆ ಕೋರಿಕೆ ಸಲ್ಲಿಸದ ಹೊರತು ವರ್ಗಾವಣೆ ಮಾಡತಕ್ಕದ್ದಲ್ಲ ಮತ್ತು ಉಪ ನಿಯಮ (1) ರಲ್ಲಿ ನಿಗಧಿಪಡಿಸಲಾದ ಕನಿಷ್ಠ ಸೇವಾವಧಿಯನ್ನು ಪೂರೈಸಿಲ್ಲದಿದ್ದರೂ, ಅವರ ವರ್ಗಾವಣೆ ಕೋರಿಕೆಯನ್ನು ಪರಿಗಣಿಸತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎನ್. ಕುಮಾರ್
(ಎನ್.ಕುಮಾರ್) 29/05/2025
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ & ಯೋಜನೆ)

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಈ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಿದೆ.

**ಪ್ರತಿ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-1), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು-1 & 2), ವಿಧಾನ ಸೌಧ, ಬೆಂಗಳೂರು.
6. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7. ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು (ವಿಷಯ ಸಂಖ್ಯೆ: ಸಿ. 381/2025)
8. ಎಲ್ಲಾ ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
10. ಕಚೇರಿ ಪ್ರತಿ / ಶಾಖಾ ರಕ್ಷ ಕಡತ.

Scanned with CamScanner